Edition #1

WWW.THERURALMIRROR.COM

06 ಮಾರ್ಚ್ 2024

# ದ ರೂರಲ್ ಮಿರರ್

Constructive Media




## ಕಟಾವಿಗೆ ಬಂದ ಬಾಳೆ ಸರ್ವನಾಶ

ಕಟಾವಿಗೆ ಬಂದ ಬೆಳೆ ಸರ್ವನಾಶವಾದರೆ ರೈತನ ಕರುಳು ಕಿತ್ತು ಬರುವುದು ಅಷ್ಟೇ ಅಲ್ಲ, ಈ ಹೊಲ ನೋಡಿದ ಯಾರಿಗೂ ವಿಷಾದ ಮೂಡದೇ ಇರದು. ಅಂತಹದ್ದೊಂದು ಘಟನೆ ಶಿರಾ ತಾಲೂಕಿನ ಹುಲಿಕುಂಟೆಯ ಬಳಿ  ನಡೆದಿದೆ.

ಶಿರಾ ತಾಲೂಕು ಹುಲಿಕುಂಟೆ ಹೋಬಳಿಯ ಬಡಮಾರಲಹಳ್ಳಿ ಗ್ರಾಮದ ಗೊಣಿಹಳ್ಳಿ ಗ್ರಾಮದ ನಾಗೇಂದ್ರ ಎಂಬ ರೈತ ಜಮೀನಿನಲ್ಲಿ ಕಿಡಿಗೇಡಿಗಳು ಬೆಂಕಿ ಹಚ್ಚಿದ್ದಾರೆ. ಇದರ ಪರಿಣಾಮ ಇಡೀ ತೋಟಕ್ಕೆ ಬೆಂಕಿ ಆವರಿಸಿ ನಷ್ಟ ಸಂಭವಿಸಿದೆ. ಸುಮಾರು 4 ಎಕರೆ ಜಮೀನಿನಲ್ಲಿ ಕೊಯ್ಲಿಗೆ ಬಂದ ಬಾಳೆ ತೋಟ ಬೆಂಕಿಗೆ ಆಹುತಿಯಾಗಿದೆ. ಬೆಂಕಿ ಹಚ್ಚಿರುವುದು ಉದ್ದೇಶಪೂರ್ವಕವೇ ಅಥವಾ ಆಕಸ್ಮಿಕವಾಗಿ ಬೆಂಕಿ ತಗುಲಿದೆಯೇ ಎಂಬ ಬಗ್ಗೆ ಮಾಹಿತಿ ಪಡೆಯಲಾಗುತ್ತಿದೆ.

ಕಟಾವಿಗೆ ಬಂದ ತೋಟಕ್ಕೆ ಬೆಂಕಿ ತಗುಲಿ ಇಡೀ ಬೆಳೆ ನಷ್ಟ ಸಂಭವಿಸಿದೆ. ರೈತನಿಗೆ ಅಪಾರ ನಷ್ಟ ಸಂಭವಿಸಿದೆ.ತೋಟಗಾರಿಕೆ ಇಲಾಖೆ ಆದಷ್ಟು ಬೇಗ ಕ್ರಮ ಕೈಗೊಂಡು ಈ ರೈತರಿಗೆ ಆಗಿರುವ ನಷ್ಟವನ್ನು ತುಂಬುದ ಕೆಲಸ ಮಾಡಬೇಕು ಎಂದು ಕರ್ನಾಟಕ ರಾಜ್ಯ ರೈತ ಸಂಘ ಹಾಗೂ ಹಸಿರು ಸೇನೆಯ ಶಿರಾ ತಾಲೂಕು ಅಧ್ಯಕ್ಷ ನವೀನ್ ಕುಮಾರ್ ಒತ್ತಾಯಿಸಿದ್ದಾರೆ.

SCAN ME

## ಒಣ ಹುಲ್ಲಿಗೆ ಹೆಚ್ಚಿದ ಬೇಡಿಕೆ

ಬರಗಾಲ(DROUGHT) ಬಂದ್ರೆ ಜನ- ಜಾನುವಾರು, ಕಾಡು ಪ್ರಾಣಿ ಪಕ್ಷಿಗಳಿಂದ(ANIMAL-BIRDS) ಹಿಡಿದು ಕ್ರಿಮಿ ಕೀಟಗಳಿಗೂ ತೊಂದರೆ ತಪ್ಪಿದ್ದಲ್ಲ. ಎಲ್ಲೆಲ್ಲೂ ನೀರು ಆಹಾರಕ್ಕಾಗಿ(WATER-FOOD) ಪರದಾಡುವ ಪರಿಸ್ಥಿತಿ ಬಂದೊದಗುತ್ತದೆ. ಮಳೆಯ ಕೊರತೆಯಿಂದ(LESS RAIN) ಈ ಬಾರಿ ಜಾನುವಾರುಗಳ(CATTLE) ಮೇವಿಗೂ(FODDER) ಸಂಕಷ್ಟಪಡುವಂತಾಗಿದೆ. ಇದರಿಂದ ಮೇವಿಗೂ ಹೆಚ್ಚಿನ ಬೇಡಿಕೆ ಬಂದಿದೆ. ಇನ್ನೇನು ಮೇವು ಮಾರಾಟ ಮಾಡುವ ರೈತರಿಗೆ (FARMERS) ಸದ್ಯ ಸುಗ್ಗಿ ಕಾಲ ಎನ್ನಬಹುದು. ಮಹಾರಾಷ್ಟ್ರದಿಂದ(MAHARASTRA) ಬೆಳಗಾವಿಗೆ(BELAGAVI) ಬಂದು ಮೇವು  ಕೊಂಡೊಯ್ಯುವವರ ಸಂಖ್ಯೆಯೂ ಹೆಚ್ಚಾಗಿದೆ.

ಮೇವಿಗೆ ಅಭಾವ : ದನಕರುಗಳಿಗೆ ಜೋಳದ ದಂಟು, ತೊಗರಿ ಹೊಟ್ಟು, ಹುರುಳಿ ಬಳ್ಳಿ, ಶೇಂಗಾ ಹೊಟ್ಟನ್ನು ಮೇವಾಗಿ ಬಳಕೆ ಮಾಡಲಾಗುತ್ತದೆ. ಮಳೆ ಕಡಿಮೆಯಾದ ಪರಿಣಾಮ ತೊಗರಿ ಹೊಟ್ಟು ಹಾಗೂ ಜೋಳದ ದಂಟಿನ ಮೇವಿನ ಅಭಾವ ಉಂಟಾಗಿದೆ. ಹುರುಳಿ ಬಳ್ಳಿಯ ಹೊಟ್ಟು ಹಾಗೂ ಶೇಂಗಾ ಹೊಟ್ಟು ದುಬಾರಿಯಾಗಿದೆ. ತುಸು ಹೆಚ್ಚು ಬೆಲೆಯಾದರೂ ಜೋಳದ ದಂಟಿನ ಮೇವು ಖರೀದಿಗೆ ರೈತರು ಅಲೆದಾಡುತ್ತಿದ್ದಾರೆ.